*(ಆರೋಪಿಯು ನ್ಯಾಯಾಂಗ ಬಂಧನದಲ್ಲಿದ್ದು, ಆತನನ್ನು ಈ ದಿನ* ***Google meet*** *ನಲ್ಲಿ ವೀಡಿಯೋ ಕಾನ್ಫರೆನ್ಸಿಂಗ್ ಮುಖಾಂತರ ಕಾರಾಗೃಹದಿಂದ ಹಾಜರುಪಡಿಸಲಾಗಿರುತ್ತದೆ. ಸಾಕ್ಷಿಯ ವಿಚಾರಣೆಯನ್ನು ದಾಖಲಿಸುವ ಮೊದಲು ಆರೋಪಿಗೆ ಸಾಕ್ಷಿ ಮಾತನಾಡುವುದು ಸರಿಯಾಗಿ ಕೇಳಿಸುತ್ತಿದೆ ಮತ್ತು ವಿಡಿಯೋ ಕಾನ್ಫರೆನ್ಸಿಂಗ್ ಮುಖಾಂತರ ಸಾಕ್ಷಿಯ ವಿಚಾರಣೆಯನ್ನು ದಾಖಲಿಸಲು ಯಾವುದೇ ತಾಂತ್ರಿಕ ಸಮಸ್ಯೆ ಇಲ್ಲವೆಂದು ಖಾತ್ರಿಪಡಿಸಿಕೊಳ್ಳಲಾಯಿತು.)*

ದಿನಾಂಕಃ 10-02-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

<u>ಮುಂದುವರೆದ ಮುಖ್ಯ ವಿಚಾರಣೆಃ ಸರ್ಕಾರಿ ಅಭಿಯೋಜಕರಿಂದಃ</u>

5. ನಂತರ ಘಟನೆಯ ಬಗ್ಗೆ ಠಾಣೆಯ ಪಿ.ಎಸ್.ಐ. ಆದ ಫ್ರಾಸಾ.10 ರವರಿಗೆ ಮೌಖಿಕವಾಗಿ ಮಾಹಿತಿ ತಿಳಿಸಿದ್ದೇನೆ. ನಂತರ ಆಂಬ್ಯುಲೇನ್ಸ ತರಿಸಿ ಮೃತ ದೇಹವನ್ನು ಮುಂದಿನ ಕ್ರಮಕ್ಕಾಗಿ ಚಿಕ್ಕಮಗಳೂರು ಜಿಲ್ಲಾ ಆಸ್ಪತ್ರೆಯ ಶವಗಾರಕ್ಕೆ ಸಲ್ಲಿಸಿದೆನು. ಸದರಿ ಆಸ್ಪತ್ರೆಯ ವೈದ್ಯಾಧಿಕಾರಿಗಳಿಗೆ ಶವವನ್ನು ಶವಗಾರದಲ್ಲಿ ಇರಿಸಲು ಅನುಮತಿ ಕೋರಿ ಮನವಿ ಸಲ್ಲಿಸಿದೆನು. ಸಾಕ್ಷಿ ಸದರಿ ಮನವಿ ಮತ್ತು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ಮನವಿಯನ್ನು ಈಗಾಗಲೇ ನಿಪಿ.35 ಎಂದು ಗುರುತಿಸಲಾಗಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.35(ಎ) ಎಂದು ಗುರುತಿಸಲಾಯಿತು. ನಂತರ ಠಾಣೆಗೆ ಹಿಂದಿರುಗಿ ಬೆಳಿಗ್ಗೆ 9 ಗಂಟೆಯವರೆಗೆ ಠಾಣಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದ್ದೇನೆ.

ಸಾಕ್ಷಿ ಈಗಾಗಲೇ ನಿಪಿ.3 ಮತ್ತು ಪಿ.4 ಫೋಟೋಗಳಲ್ಲಿರುವ ಶವವನ್ನು ನೋಡಿ ಗುರುತಿಸಿರುತ್ತಾರೆ.

<u>ಪಾಟೀ ಸವಾಲುಃ ಆರೋಪಿಯ ಪರವಾಗಿಃ **LADCS** ನ **Deputy Chief Defense counsel** ಆದ ಶ್ರೀ ಎನ್.ಡಿ ವಕೀಲರಿಂದಃ</u>

(ಈ ಹಂತದಲ್ಲಿ ವಿಡಿಯೋ ಕಾನ್ಫರೇನ್ಸಿಂಗ್ ಮುಖಾಂತರ ಹಾಜರುಪಡಿಸಿರುವ ಆರೋಪಿಯನ್ನು ಕುರಿತು ಧ್ವನಿ ಕೇಳಿಸುತ್ತಿದೆಯೇ ಎಂದು ಕೇಳಿ, ಕೇಳಿಸುತ್ತಿದೆ ಎಂದು ಖಾತ್ರಿಪಡಿಸಿಕೊಳ್ಳಲಾಯಿತು).

6. ಠಾಣಾಧಿಕಾರಿಯ ಕರ್ತವ್ಯ ಏನು ಎಂದು ಹೇಳಲಾಗುತ್ತದೆಯೇ ಎಂದರೆ ಸಾಕ್ಷಿ ಠಾಣಾ ಉಸ್ತುವರಿಯನ್ನು ವಹಿಸಿಕೊಂಡಿರುತ್ತೇವೆ ಎನ್ನುತ್ತಾರೆ. ಕಾಗ್ನಿಸೇಬಲ್ ಅಪರಾಧದ ಬಗ್ಗೆ ಯಾವುದಾದರೂ ಮಾಹಿತಿ ಬಂದಲ್ಲಿ ಠಾಣಾಧಿಕಾರಿಗಳು ಆ ಬಗ್ಗೆ ಪ್ರಕರಣವನ್ನು ದಾಖಲಿಸಬೇಕಾಗುತ್ತದೆ ಎಂದರೆ ಸರಿ.

7. ದಿಃ 10-05-2024 ರಂದು ಬೆಳಗಿನ ಜಾವ 2.30 ಗಂಟೆಗೆ ಠಾಣೆಯ ಸ್ಥಿರ ದೂರವಾಣಿಗೆ ಕರೆ ಮಾಡಿದ್ದಾಗಿ ಹೇಳಿದ್ದೀರಿ ಆ ರೀತಿ ಕರೆ ಮಾಡಿದವರು ಯಾರು ಎಂದು ಠಾಣಾ ದಿನಚರಿಯಲ್ಲಿ ನಮೂದು ಮಾಡಿದ್ದೀರಾ ಎಂದರೆ ಸಾಕ್ಷಿ ಕರೆ ಮಾಡಿದವರು ಸಾರ್ವಜನಿಕರು ಆಗಿದ್ದರು ಅವರು ತಮ್ಮ ಹೆಸರನ್ನು ಹೇಳಿರಲಿಲ್ಲ ಹಾಗಾಗಿ ನಮೂದು ಮಾಡಿರಲಿಲ್ಲ ಎನ್ನುತ್ತಾರೆ. ಆ ರೀತಿ ಮಾಹಿತಿ

ಬಂದ ಬಗ್ಗೆ ಠಾಣಾ ದಿನಚರಿಯಲ್ಲಿ ನಮೂದು ಮಾಡಿದ್ದೀರಾ ಎಂದರೆ ಸಾಕ್ಷಿ ಇಲ್ಲ ಎನ್ನುತ್ತಾರೆ. ನೀವು ಸ್ಥಳಕ್ಕೆ ಹೋಗಿದ್ದಾಗಿ, ಅಲ್ಲಿ ಸಾರ್ವಜನಿಕರು ನೆರೆದಿದ್ದಾಗಿ ಹೇಳಿದ್ದೀರಿ ಅವರ ಹೆಸರು ಮತ್ತು ವಿಳಾಸವನ್ನು ಪಡೆದುಕೊಂಡು ಅವರ ಹೇಳಿಕೆಗಳನ್ನು ಪಡೆದಿದ್ದೀರಾ ಎಂದರೆ ಸಾಕ್ಷಿ ಇಲ್ಲ ಎನ್ನುತ್ತಾರೆ.

8. ನೀವು ಸ್ಥಳಕ್ಕೆ ಭೇಟಿ ನೀಡಿದ್ದಾಗಿ ಹೇಳಿದ್ದೀರಿ ಆ ಸಮಯದಲ್ಲಿ ಸ್ಥಳವನ್ನು ಸಂರಕ್ಷಿಸಲು ಕ್ರಮ ಕೈಗೊಂಡಿದ್ದೀರಾ ಎಂದರೆ ಸಾಕ್ಷಿ ಹೌದು ಎನ್ನುತ್ತಾರೆ. ಆ ವಿಚಾರವನ್ನು ನೀವು ತನಿಖಾಧಿಕಾರಿಗಳಿಗೆ ನೀಡಿದ್ದೀರಿ ಎನ್ನಲಾದ ಹೇಳಿಕೆಯಲ್ಲಿ ತಿಳಿಸಿದ್ದೀರಾ ಎಂದರೆ ಸಾಕ್ಷಿ ಹೇಳಿಕೆಯಲ್ಲಿ ತಿಳಿಸಿಲ್ಲ ಆದರೆ ಮೌಖಿಕವಾಗಿ ತಿಳಿಸಿದ್ದೇನೆ ಎನ್ನುತ್ತಾರೆ.

9. ನೀವು ಸ್ಥಳಕ್ಕೆ ಭೇಟಿ ನೀಡಿದಾಗ ಫುಟಪಾತ್‌ನಲ್ಲಿ ಒಬ್ಬ ಹೆಂಗಸಿನ ಮೃತ ದೇಹ ಇತ್ತು, ನೀವು ಆಂಬ್ಯುಲೇನ್ಸನ್ನು ತರಿಸಿ ಶವವನ್ನು ಚಿಕ್ಕಮಗಳೂರು ಜಿಲ್ಲಾ ಆಸ್ಪತ್ರೆಯ ಶವಗಾರಕ್ಕೆ ಸಾಗಿಸಿದ್ದಾಗಿ ನೀವು ನಿಮ್ಮ ಮುಖ್ಯ ವಿಚಾರಣೆಯಲ್ಲಿಯೇ ಪ್ರಥಮ ಭಾರಿಗೆ ಹೇಳಿರುವುದನ್ನು ಹೊರತುಪಡಿಸಿ ನೀವು ತನಿಖಾಧಿಕಾರಿಗಳಿಗೆ ನೀಡಿದ್ದೀರಿ ಎನ್ನಲಾದ ಹೇಳಿಕೆಯಲ್ಲಿ ತಿಳಿಸಿಲ್ಲ ಎಂದರೆ ಸರಿಯಲ್ಲ. ಸದರಿ ವಿಚಾರವನ್ನು ನೀವು ತನಿಖಾಧಿಕಾರಿಗಳಿಗೆ ನೀಡಿದ್ದೀರಿ ಎನ್ನಲಾದ ಹೇಳಿಕೆಯಲ್ಲಿ ತಿಳಿಸಿಲ್ಲ ಎಂದರೆ ಸರಿಯಲ್ಲ.

10. ನೀವು ಪ್ರಥಮ ವರ್ತಮಾನ ವರದಿಯನ್ನು ದಾಖಲಿಸಲು ಯಾವುದಾದರು ತೊಂದರೆ ಇತ್ತೇ ಎಂದರೆ ಸಾಕ್ಷಿ ಘೋರ

ಅಪರಾಧಗಳಲ್ಲಿ ಪಿ.ಎಸ್.ಐ. ಮತ್ತು ಅವರಿಗಿಂತಲೂ ಉನ್ನತ ಅಧಿಕಾರಿಗಳು ಪ್ರಥಮ ವರ್ತಮಾನ ವರದಿಯನ್ನು ದಾಖಲಿಸಬೇಕು ಎಂದು ಮಾರ್ಗಸೂಚಿ ಇದೆ ಹಾಗಾಗಿ ನಾನು ದಾಖಲಿಸಿಲ್ಲ ಎನ್ನುತ್ತಾರೆ. ಠಾಣಾಧಿಕಾರಿಯ ಕರ್ತವ್ಯವನ್ನು ನಿರ್ವಹಿಸುವ ಬಗ್ಗೆ ನಿಮಗೆ ತರಬೇತಿಯಾಗಿದೆ ಎಂದರೆ ಸರಿ.

11. ನನಗೆ ಈ ಹಿಂದೆ ಆರೋಪಿಯ ಪರಿಚಯ ಇರಲಿಲ್ಲ. ಆರೋಪಿಯನ್ನು ಮೊದಲ ಬಾರಿಗೆ ನ್ಯಾಯಾಲಯದಲ್ಲಿಯೇ ನೋಡಿರುವುದು. ನಾನು ಫ್ರಾಸಾ.10 ರವರಿಗೆ ದೂರವಾಣಿ ಮುಖಾಂತರ ಮಾಹಿತಿ ಕೊಟ್ಟೆನು ಆಗ ಸಮಯ ಬೆಳಗಿನ ಜಾವ 3 ಗಂಟೆಯಾಗಿತ್ತು. ಸದರಿ ವಿಚಾರವನ್ನು ತನಿಖಾಧಿಕಾರಿಗಳಿಗೆ ತಿಳಿಸಿದ್ದೀರಾ ಎಂದರೆ ಸಾಕ್ಷಿ ಮೌಖಿಕವಾಗಿ ತಿಳಿಸಿದ್ದೇನೆ ಎನ್ನುತ್ತಾರೆ.

12. ಚಿಕ್ಕಮಗಳೂರಿನ ಹಿರಿಯ ಸಿವಿಲ್ ಮತ್ತು ಸಿಜೆಎಂ ನ್ಯಾಯಾಧೀಶರವರು ಕ್ರಿಮಿನಲ್ ಮಿಸ್ 307/2023 ರಲ್ಲಿ ಮಾಡಿದ್ದ ಆದೇಶದ ಮೇರೆಗೆ ಆರೋಪಿಯನ್ನು ನಿಮಾನ್ಸ ಆಸ್ಪತ್ರೆಗೆ ಕರೆದುಕೊಂಡು ಹೋಗಿ ದಾಖಲಿಸುವಂತೆ ಚಿಕ್ಕಮಗಳೂರು ನಗರ ಪೊಲೀಸ್ ಠಾಣಾಧಿಕಾರಿಗೆ ಸೂಚಿಸಲಾಗಿತ್ತು ಎಂದರೆ ನನಗೆ ಮಾಹಿತಿ ಇಲ್ಲ. ಮಾನಸಿಕ ಆರೋಗ್ಯ ಕಾಯ್ದೆ ಅಡಿಯಲ್ಲಿ ಆತ ಚಿಕಿತ್ಸೆ ಪಡೆದುಕೊಂಡ ಬಗ್ಗೆ ದಾಖಲೆಗಳು ಸದರಿ ಠಾಣೆಯಲ್ಲಿ ಇದ್ದವು ಎಂದರೆ ಸರಿಯಲ್ಲ. ಆರೋಪಿಯನ್ನು ನಿಮಾನ್ಸ ಆಸ್ಪತ್ರೆಗೆ ಕರೆದುಕೊಂಡು ಹೋಗಲು ನಿಮ್ಮನ್ನು ನೇಮಿಸಲಾಗಿತ್ತೇ ಎಂದರೆ ಸಾಕ್ಷಿ ಇಲ್ಲ ಎನ್ನುತ್ತಾರೆ. ಮೇಲೆ ಹೇಳಿದ ಪ್ರಕರಣದ ಬಗ್ಗೆ ನಿಮಗೆ

ಮಾಹಿತಿ ಇದ್ದರೂ ಸಹ ಏನು ಗೊತ್ತಿಲ್ಲ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

13. ಆರೋಪಿ ಬೈಪೋಲಲರ್ ಡಿಸ್ ಅರ್ಡರ್ ನಿಂದ ಬಳಲುತ್ತಿದ್ದು ಆತ ರಾತ್ರಿ ಎಲ್ಲೆಂದರಲ್ಲಿ ಓಡಾಡುತ್ತಿದ್ದ ಕಾರಣ ಸಾರ್ವಜನಿಕರು ಆತನನ್ನು ಹಿಡಿದು ನಿಮಗೆ ಒಪ್ಪಿಸಿದ್ದರು ಎಂದರೆ ಸರಿಯಲ್ಲ. ಆರೋಪಿಯನ್ನು ನಿಮಗೆ ಒಪ್ಪಿಸಿದ್ದರೂ ಸಹ ನೀವು ಆತನಿಗೆ ಸೂಕ್ತ ಚಿಕಿತ್ಸೆ ಕೊಡಿಸದೇ ಕರ್ತವ್ಯ ಲೋಪವೆಸಗಿದ್ದೀರಿ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು ನನಗೆ ಆರೋಪಿಯ ಬಗ್ಗೆ ಮಾಹಿತಿಯೇ ಇಲ್ಲ ಎನ್ನುತ್ತಾರೆ. ಆ ವಿಷಯ ನಿಮಗೆ ಗೊತ್ತಿದ್ದರೂ ಕೂಡ ಮಾಹಿತಿ ಬಂದ ಕೂಡಲೇ ನೀವು ಪ್ರಥಮ ವರ್ತಮಾನ ವರದಿಯನ್ನು ದಾಖಲಿಸದೇ ಅದನ್ನು ತಡವಾಗಿ ದಾಖಲಿಸಲು ನೀವು ಸಹಾಯ ಮಾಡಿದ್ದೀರಿ ಎಂದರೆ ಸರಿಯಲ್ಲ.

14. ಆ ದಿನ ಚಾಸಾ.21 ರವರು ರಾತ್ರಿ ಗಸ್ತು ಸಿಬ್ಬಂದಿಗಳ ತಪಾಸಣೆ ಕರ್ತವ್ಯಕ್ಕೆ ಹೋದ ಬಗ್ಗೆ ದಾಖಲೆ ಹಾಜರುಪಡಿಸಿದ್ದೀರಾ ಎಂದರೆ ಸಾಕ್ಷಿ ಆ ಬಗ್ಗೆ ಠಾಣಾ ದಿನಚರಿಯಲ್ಲಿ ನಮೂದು ಮಾಡಲಾಗಿದೆ ಎನ್ನುತ್ತಾರೆ. ನೀವು ಸ್ಥಳಕ್ಕೆ ಹೋಗಿದ್ದಾಗಿ, ಅಲ್ಲಿ ಫುಟಪಾತ್ ರಸ್ತೆಯಲ್ಲಿ ರಕ್ತದ ಕಲೆಗಳು ಇರುವುದು ಕಂಡುಬಂದಿದ್ದಾಗಿ ಮತ್ತು ಒಬ್ಬ ಹೆಂಗಸಿನ ಮೃತ ದೇಹ ಇರುವುದು ಕಂಡುಬಂದಿದ್ದಾಗಿ ಹೇಳಿರುವುದು ಸುಳ್ಳು ಎಂದರೆ ಸರಿಯಲ್ಲ. ಅಲ್ಲಿ ನೆರೆದಿದ್ದ ಸಾರ್ವಜನಿಕರನ್ನು ನೀವು ವಿಚಾರಿಸಿದ್ದಾಗಿ ಅವರು, ಸದರಿ ಫುಟಪಾತಿನ ಮೇಲೆ ಮಲಗಿದ್ದ ಒಬ್ಬ ಬಿಕ್ಷುಕಿಯ ತಲೆಯ ಮೇಲೆ ಪೂರ್ಣೇಶ್ ಎಂಬಾತ ಕಲ್ಲನ್ನು ಎತ್ತಿ ಹಾಕಿ ಕೊಲೆ ಮಾಡಿದ್ದಾಗಿ

ತಿಳಿಸಿದ್ದಾಗಿ ಹೇಳಿರುವುದು ಸುಳ್ಳು ಎಂದರೆ ಸರಿಯಲ್ಲ. ಮೃತಳಿಗೆ ಮದ್ಯಪಾನ ಮಾಡುವ ಅಭ್ಯಾಸವಿದ್ದು ಆಕೆ ಮದ್ಯವನ್ನು ಸೇವಿಸಿ ಕಲ್ಲಿನ ಮೇಲೆ ಬಿದ್ದು ಮೃತಪಟ್ಟಿರುವುದು ನಿಮಗೆ ತಿಳಿದು ಬಂದಿದ್ದರೂ ಸಹ ಅದನ್ನು ಮರೆಮಾಚಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

<u>ಮರು ವಿಚಾರಣೆಃ ಇಲ್ಲ.</u>

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು )

ಓ.ಹೇ.ಕೇ.ಸ.ಇ.ಎ.ಒ.

ಸಹಿ/-
(ಭಾನುಮತಿ ಬಿ.ಸಿ)
1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿಕ್ಕಮಗಳೂರು.

ಸಾಕ್ಷಿಯ ಸಹಿ